ಕರ್ನಾಟಕ ಸರ್ಕಾರ

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/09/ಇಸಿಎಸ್(2)/2019-20

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ:08-01-2020

**ಸುತ್ತೋಲೆ**

ವಿಷಯ: 2019 ರ ಅಕ್ಟೋಬರ್/ನವೆಂಬರ್ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ/ ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ:ಈ ಕಛೇರಿ ಸುತ್ತೋಲೆ ಸಂಖ್ಯೆ:ಬಿಟಿಇ/09/ಇಸಿಎಸ್(2)/2019-20 ದಿ:27-12-2019

*******

ಮೇಲ್ಕಂಡ ವಿಷಯ ಸಂಬಂಧಿಸಿದಂತೆ, 2019 ರ ಅಕ್ಟೋಬರ್/ನವೆಂಬರ್ ತಿಂಗಳನಲ್ಲಿ ನಡೆದ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆಯಲು ಮತ್ತು ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಇಚ್ಛಿಸುವ ವಿದ್ಯಾರ್ಥಿಗಳು ದಿನಾಂಕ:07-01-2020 ರೊಳಗೆ ಖಜಾನೆ-II ಮೂಲಕ ನಿಗದಿತ ಶುಲ್ಕವನ್ನು ಪಾವತಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಉತ್ತರ ಪತ್ರಿಕೆಗಳ ಮೌಲ್ಯಮಾಪನ /ಫೋಟೋ ಪ್ರತಿ ಗಾಗಿ ಅರ್ಜಿ ಸಲ್ಲಿಸಲು ದಿನಾಂಕ: **09-01-2020 ರವರೆಗೆ ವಿಸ್ತರಿಸಲಾಗಿದೆ.**

ಸಂಸ್ಥೆಗಳು, ಸದರಿ ವಿದ್ಯಾರ್ಥಿಗಳ ಅರ್ಜಿಗಳಲ್ಲಿನ ವಿವರಗಳನ್ನು ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನ ಮೂಲಕ ಆನ್ ಲೈನ್‌ನಲ್ಲಿ ದಿನಾಂಕ: **09-01-2020 ರವರೆಗೆ ಸಂಜೆ 5.30** ಗಂಟೆಯೊಳಗೆ ಅಪ್‌ಲೋಡ್ ಮಾಡಲು ತಿಳಿಸಲಾಗಿದೆ. ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿ/ಪೋಷಕರ ಗಮನಕ್ಕೆ ತಪ್ಪದೇ ತರಲು ಪ್ರಾಂಶುಪಾಲರಿಗೆ ಈ ಮೂಲಕ ತಿಳಿಸಲಾಗಿದೆ.

08/01/2020

**ಕಾರ್ಯದರ್ಶಿ**

**ಇವರಿಗೆ,**

ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ -ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

2) ಗಣಕ ಕೇಂದ್ರ - ವೆಬ್‌ಪೋರ್ಟಲ್/ www.btekarlinx.net ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

3) ಕಾರ್ಯದರ್ಶಿಯವರು ಆಪ್ತ ಶಾಖೆ